# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 344 |
| 2 | ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 16-02-2023 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ವಾರ್ಡ್‌ಗಳಲ್ಲಿ ಮಳೆ ಬಂದಾಗ ಮಳೆ ನೀರು ರಸ್ತೆ ಬದಿಗಳ ಚರಂಡಿಗೆ ಹರಿಯದೆ, ರಸ್ತೆಯಲ್ಲಿ ನಿಂತು ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಆಗುತ್ತಿರುವುದನ್ನು ಸಮರ್ಪಕವಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಪಾಲಿಕೆ ವಾರ್ಡ್ ಅಧಿಕಾರಿಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 13000 ಕಿಲೋ ಮೀಟರ್‌ಗೂ ಹೆಚ್ಚು ರಸ್ತೆ ಜಾಲವಿದ್ದು, ಮಳೆಗಾಲವು ಪ್ರಾರಂಭವಾಗುವ ಮುಂಚಿತವಾಗಿಯೇ, ಎಲ್ಲಾ ರಸ್ತೆಗಳ ಚರಂಡಿಗಳಲ್ಲಿ ಇರುವ ಹೂಳನ್ನು ಆಗಿಂದಾಗ್ಗೆ ವಿವಿಧ ಯೋಜನೆಗಳಲ್ಲಿ ವಾರ್ಷಿಕ ನಿರ್ವಹಣೆಯ ಗುತ್ತಿಗೆದಾರರಿಂದ ತೆರವುಗೊಳಿಸುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ. ಬಿಬಿಎಂಪಿ ವತಿಯಿಂದ ಮಳೆಗಾಲದಲ್ಲಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಕೈಗೊಳ್ಳಲು ಪಾಲಿಕೆಯ ಅಧಿಕಾರಿಗಳಿಗೆ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ. |
| ಆ) | ಚರಂಡಿಯಲ್ಲಿ ಶೇಖರಣೆಯಾಗಿರುವ ಕಸಗಳನ್ನು ತೆಗೆಯಲು ಮಳೆಗಾಲಕ್ಕೆ ಮುಂಚೆಯೇ ಕಾಮಗಾರಿಗಳನ್ನು ಕೈಗೊಳ್ಳಲು ಪಾಲಿಕೆಯ ವಾರ್ಡ್‌ಗಳಲ್ಲಿನ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣವೇನು; | ಮಳೆಗಾಲವು ಪ್ರಾರಂಭವಾಗುವ ಮುಂಚಿತವಾಗಿಯೇ ಎಲ್ಲಾ ರಸ್ತೆಗಳ ಚರಂಡಿಗಳಲ್ಲಿ ಇರುವ ಹೂಳನ್ನು ಆಗಿಂದಾಗ್ಗೆ ವಿವಿಧ ಯೋಜನೆಗಳಲ್ಲಿ ವಾರ್ಷಿಕ ನಿರ್ವಹಣೆಯ ಗುತ್ತಿಗೆದಾರರಿಂದ ತೆರವುಗೊಳಿಸಲಾಗುತ್ತಿದೆ. ಈ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ. |
| ಇ) | ಪಾಲಿಕೆ ವ್ಯಾಪ್ತಿಯಲ್ಲಿ ಸಾಕಷ್ಟು ವಾರ್ಡ್‌ಗಳಲ್ಲಿ ರಸ್ತೆಗಳಿಗೆ ಮತ್ತು ನೀರು ಹರಿಯುವ ರಸ್ತೆ ಬದಿಯ ಚರಂಡಿಗಳ ನಿರ್ವಹಣೆಗೆ 2022 ರಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು; (ಮಾಹಿತಿ ಒದಗಿಸುವುದು) | ಪಾಲಿಕೆ ವ್ಯಾಪ್ತಿಯಲ್ಲಿ ಸಾಕಷ್ಟು ವಾರ್ಡ್‌ಗಳಲ್ಲಿ ರಸ್ತೆಗಳಿಗೆ ಮತ್ತು ನೀರು ಹರಿಯುವ ರಸ್ತೆ ಬದಿಯ ಚರಂಡಿಗಳ ನಿರ್ವಹಣೆಗೆ 2022 ರಲ್ಲಿ ಖರ್ಚು ಮಾಡಿರುವ ಅನುದಾನದ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಈ) | ಮಹಾನಗರ ಪಾಲಿಕೆಯು ಇನ್ನು ಮುಂದೆ ಇಂತಹ ಸಮಸ್ಯೆ ಯಾಗದಂತೆ ಮುಂಜಾಗ್ರತಾ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಳೆಗಾಲವು ಪ್ರಾರಂಭವಾಗುವ ಮುಂಚಿತವಾಗಿಯೇ ಎಲ್ಲಾ ರಸ್ತೆಗಳ ಚರಂಡಿಗಳಲ್ಲಿ ಇರುವ ಹೂಳನ್ನು ಆಗಿಂದಾಗ್ಗೆ ವಿವಿಧ |

| | | |
|---|---|---|
| | ಕ್ರಮವಾಗಿ, ಪಾರದರ್ಶಕವಾಗಿ ನಿರ್ದಿಷ್ಟ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ? | ಯೋಜನೆಗಳಲ್ಲಿ ವಾರ್ಷಿಕ ನಿರ್ವಹಣೆಯ ಗುತ್ತಿಗೆದಾರರಿಂದ ಕಾಲಕಾಲಕ್ಕೆ ತೆರವುಗೊಳಿಸಲಾಗುತ್ತಿದೆ. ಅಗತ್ಯ ಮತ್ತು ಅವಶ್ಯಕತೆಗೆ ತಕ್ಕಂತೆ ಯೋಜನೆಗಳನ್ನು ಪಾರದರ್ಶಕವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಮಳೆಗಾಲದಲ್ಲಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಕೈಗೊಳ್ಳಲು ಪಾಲಿಕೆಯ ಅಧಿಕಾರಿಗಳಿಗೆ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ. |

ಸಂಖ್ಯೆ: ನಅಇ 93 ಎಂಎನ್‌ವೈ 2023 (ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | | |
|---|---|---|
| ಅನುಬಂಧ – 1 | | |
| ಕ್ರಮ ಸಂ | ವಲಯ | ಮೊತ್ತ (ರೂ.ಲಕ್ಷಗಳಲ್ಲಿ) |
| 1 | EAST | 1760.00 |
| 2 | WEST | 660.00 |
| 3 | SOUTH | 1760.00 |
| 4 | BOMMANAHALLI | 240.00 |
| 5 | DASARAHALLI | 93.20 |
| 6 | MAHADEVAPURA | 315.00 |
| 7 | RR NAGAR | 560.00 |
| 8 | YELAHANKA | 757.00 |
| 9 | ROAD INFRASTRUCTURE | 750.00 |
| TOTAL | | **6895.20** |

ಪ್ರಧಾನ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು.